# All India Radio: Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**25.11.2025** **6.40 PM**

***************

ಮುಖ್ಯಾಂಶಗಳು

- ರಾಜ್ಯದ ಇನ್ನೂ ಹಲವೆಡೆ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರ ನಿರ್ಧಾರ
- ಮುಖ್ಯಮಂತ್ರಿ ಹುದ್ದೆಯ ನಿರ್ಧಾರ ಪಕ್ಷದ ಉನ್ನತ ನಾಯಕರ ನಡುವಿನ ಗೌಪ್ಯ ವಿಚಾರ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಬೆಳಗಾವಿಯಲ್ಲಿ ರಾಣಿಚೆನ್ನಮ್ಮ ವಿಶ್ವವಿದ್ಯಾಲಯದ ೧೪ನೇ ಘಟಿಕೋತ್ಸವ - ಗೌರವ ಡಾಕ್ಟರೇಟ್ ಪ್ರದಾನ ಮಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
- ನಾಳೆ ಸರ್ಕಾರದ ವತಿಯಿಂದ ರಾಜ್ಯಾದ್ಯಂತ ಸಂವಿಧಾನ ದಿನಾಚರಣೆ
- ವಿಶ್ವಕಪ್ ವಿಜೇತ ಅಂಧರ ಮಹಿಳಾ ಕ್ರಿಕೆಟ್ ತಂಡಕ್ಕೆ ಮುಖ್ಯಮಂತ್ರಿ ಅಭಿನಂದನೆ ; ರಾಜ್ಯದ ಆಟಗಾರರಿಗೆ ಸರ್ಕಾರಿ ಉದ್ಯೋಗ ಘೋಷಣೆ

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿ ಇಂದು ಕೆ.ಕೆ.ಆರ್.ಡಿ.ಬಿ ಮ್ಯಾಕ್ರೋ ಅನುದಾನದಡಿ ನೂತನ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ಸ್ಥಾಪಿಸುವ ಸಂಬಂಧ ಸಭೆ ನಡೆಯಿತು.

ಸಭೆಯಲ್ಲಿ ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡುವ ಜಿಟಿಟಿಸಿ ಮೂಲಕ ಗ್ರಾಮೀಣ ಅಭ್ಯರ್ಥಿಗಳಿಗೆ ಹೆಚ್ಚಿನ ಉದ್ಯೋಗ ಕಲ್ಪಿಸಲು ಸಾಧ್ಯವಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಈಗಾಗಲೇ ಒಟ್ಟು ೩೨ ಜಿಟಿಟಿಸಿ ಕೇಂದ್ರಗಳಿದ್ದು, ಇಂಡಿ, ಮಧುಗಿರಿ, ಕಂಪ್ಲಿ, ರಾಯಚೂರು ಗ್ರಾಮೀಣ, ಸಿಂಧನೂರಿನಲ್ಲಿ ಜಿಟಿಟಿಸಿ ಪ್ರಾರಂಭಿಸಲು ಸ್ಥಳ ಗುರುತಿಸಲಾಗಿದೆ. ಕಾಮಗಾರಿ ಪ್ರಾರಂಭಿಸಲು ಶೀಘ್ರವೇ ಟೆಂಡರ್ ಪ್ರಕ್ರಿಯೆ ಆರಂಭಿಸಬೇಕು ಎಂದು ಸೂಚನೆ ನೀಡಿದರು.

ಜಿಟಿಟಿಸಿ ಉತ್ಪಾದನಾ ಕೇಂದ್ರದಲ್ಲಿ ಇಸ್ರೋದ ಚಂದ್ರಯಾನ ನೌಕೆ ಲೂನಾರ್ ರೋವರ್ ಚಕ್ರದ ಉತ್ಪಾದನೆ ಸೇರಿದಂತೆ ಹಲವು ವೈಮಾನಿಕ ಉಪಕರಣಗಳ ಉತ್ಪಾದನೆ ಮಾಡಲಾಗುತ್ತಿದೆ. ಜಪಾನ್, ಜರ್ಮನಿ, ಆಸ್ಟ್ರೇಲಿಯಾ ಸೇರಿದಂತೆ ಹಲವು ರಾಷ್ಟ್ರಗಳೊಂದಿಗೆ ಜಿಟಿಟಿಸಿ ಒಡಂಬಡಿಕೆ ಮಾಡಿಕೊಳ್ಳಲಿದೆ.

***************

ಮುಖ್ಯಮಂತ್ರಿ ಹುದ್ದೆಯ ಅಂತಿಮ ನಿರ್ಧಾರ ಹೈಕಮಾಂಡ್ ಹಾಗೂ ಪಕ್ಷದ ಉನ್ನತ ನಾಯಕರ ನಡುವಿನ ಗೌಪ್ಯ ವಿಷಯವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಈ ವಿಷಯದ ಕುರಿತಂತೆ ಬಹಿರಂಗ ಚರ್ಚೆ ನಡೆಸಿ, ಪಕ್ಷಕ್ಕೆ ಮುಜುಗರ ಉಂಟು ಮಾಡುವುದಿಲ್ಲ ಎಂದು ಹೇಳಿದ್ದಾರೆ. ಪಕ್ಷವನ್ನು ದುರ್ಬಲಗೊಳಿಸಲು ಬಯಸುವುದಿಲ್ಲ. ಪಕ್ಷ ಅಸ್ತಿತ್ವದಲ್ಲಿದ್ದರೆ ನಾವು ಅಸ್ತಿತ್ವದಲ್ಲಿರುತ್ತೇವೆ ಎಂದು ಹೇಳಿದ್ದಾರೆ.

೨೦೨೮ರ ವಿಧಾನಸಭಾ ಚುನಾವಣೆ ಹಾಗೂ ೨೦೨೯ರ ಲೋಕಸಭಾ ಚುನಾವಣೆಯತ್ತ ಗಮನ ಹರಿಸಲು ಪಕ್ಷದಲ್ಲಿ ಎಲ್ಲರೂ ಒಗ್ಗಟ್ಟಾಗಿರಬೇಕು ಎಂದು ಪ್ರತಿಪಾದಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಪೂರ್ಣಾವಧಿ ಅಧಿಕಾರದಲ್ಲಿರುತ್ತಾರೆ ಎಂದು ಅವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ತಿಳಿಸಿದ್ದಾರೆ.

ಕೊಪ್ಪಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರ ಹಂಚಿಕೆ ಒಪ್ಪಂದವನ್ನು ತಳ್ಳಿ ಹಾಕಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇನ್ನು ಅಧಿಕೃತವಾಗಿ ಮುಖ್ಯಮಂತ್ರಿ ಹುದ್ದೆಗೆ ಹಕ್ಕು ಮಂಡಿಸಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಸರ್ಕಾರವನ್ನು ಅಸ್ಥಿರಗೊಳಿಸಲು ಉದ್ದೇಶ ಪೂರ್ವಕವಾಗಿ ಪ್ರಯತ್ನ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

***************

ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಕೌಶಲ್ಯ ವೃದಿ ಮಾಡಿಕೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ ಗೆಹ್ಲೋಟ್ ಕರೆ ನೀಡಿದ್ದಾರೆ. ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ೧೪ನೇ ಘಟಿಕೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬೇರೆಯವರಿಗೂ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆದು ದೇಶದ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ತಿಳಿಸಿದ್ದಾರೆ.

ಸಮಾರಂಭದಲ್ಲಿ ಪರಿಸರವಾದಿ ಶಿವಾಜಿರಾವ್ ಕಾಗಣಿಕರ್, ಸಮಾಜ ಸೇವಕ ವಿನೋದ ದೊಡ್ಡಣ್ಣವರ, ಲೇಖಕ ಬಸವರಾಜ್ ಯಲಿಗಾರ್ ಅವರಿಗೆ ರಾಜ್ಯಪಾಲರು ಗೌರವ ಡಾಕ್ಟರೇಟ್ ಪ್ರದಾನ ಮಾಡಿದರು.

ಇದೇ ಸಂದರ್ಭದಲ್ಲಿ ಪಿ.ಎಚ್‌ಡಿ. ಸೇರಿದಂತೆ ಸುಮಾರು ೪ ಸಾವಿರ ವಿದ್ಯಾರ್ಥಿಗಳಿಗೆ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಪ್ರದಾನ ಮಾಡಲಾಯಿತು. ವಿಷಯವಾರು ರ‍್ಯಾಂಕ್ ವಿಜೇತ ೩೯ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

***************

ಭಾರತೀಯ ಗಗನಯಾತ್ರಿ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ವಿಧಾನಸೌಧದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸೌಹಾರ್ದ ಭೇಟಿ ಮಾಡಿದರು.

ಆಕ್ಸಿಯಮ್-೪ ಮಿಷನ್‌ನಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದ ಶುಕ್ಲಾ ಅವರನ್ನು ಮುಖ್ಯಮಂತ್ರಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಉಪಸ್ಥಿತರಿದ್ದರು.

***************

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಇಂದು ಮೈಸೂರಿನ ಕೆಎಸ್‌ಆರ್‌ಪಿ ಅಶ್ವಾರೋಹಿ ದಳ ಮತ್ತು ನಜರಾಬಾದ್ ಪೊಲೀಸ್ ಠಾಣೆಗೆ ದಿಢೀರ್ ಭೇಟಿ ನೀಡಿ ಠಾಣೆಯ ಕಾರ್ಯಪದ್ಧತಿ ಮತ್ತು

ಸಿಬ್ಬಂದಿ ಹಾಜರಾತಿ ದಾಖಲೆಯನ್ನು ಪರಿಶೀಲಿಸಿದರು. ಇದೆ ವೇಳೆ ಅಧಿಕಾರಿಗಳಿಂದ ಇಲಾಖೆಯ ವಿವಿಧ ವಿಷಯಗಳ ಕುರಿತು ವಿವರವಾದ ಮಾಹಿತಿ ಪಡೆದು ಕಾರ್ಯಕ್ಷಮತೆ ಕುರಿತು ಮಾರ್ಗದರ್ಶನ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರಿನಲ್ಲಿ ಹೆಚ್ಚುವರಿ ಪೊಲೀಸ್ ಠಾಣೆಗಳ ಅಗತ್ಯವನ್ನು ಸರ್ಕಾರ ಪರಿಶೀಲಿಸುತ್ತಿದೆ ಎಂದು ತಿಳಿಸಿದ್ದಾರೆ.

ಉದಯಗಿರಿ ಪೊಲೀಸ್ ಠಾಣೆಯನ್ನು ಈಗಾಗಲೇ ವಿಭಾಗ ಮಾಡಲಾಗಿದ್ದು, ಇನ್ನಷ್ಟು ಠಾಣೆಗಳ ಅವಶ್ಯಕತೆ ಕುರಿತು ಶೀಘ್ರದಲ್ಲೇ ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ ರಾಜ್ಯದಲ್ಲಿ ಹಾಗೂ ಮೈಸೂರಿನಲ್ಲಿ ಆನ್‌ಲೈನ್ ವಂಚನೆ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಗೃಹ ಸಚಿವರು ಕಳವಳ ವ್ಯಕ್ತಪಡಿಸಿದರು. ಆನ್‌ಲೈನ್ ಅಪರಾಧಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಗೆ ವಿಶೇಷ ತರಬೇತಿ ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ನಾಳೆ ಸಂವಿಧಾನ ದಿನಾಚರಣೆಯನ್ನು ಸರ್ಕಾರದ ವತಿಯಿಂದ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆಯುವ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಡಾ.ಮನಮೋಹನ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಕೇಂದ್ರ ಹಾಗೂ ರಾಜ್ಯ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ನಾಳೆ ಸಂವಿಧಾನ ದಿನಾಚರಣೆ ಮತ್ತು ಸಂವಿಧಾನ ಸೈನಿಕರ ಸಮಾವೇಶ ಏರ್ಪಡಿಸಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಾಳೆ ಸಂವಿಧಾನ ದಿನಾಚರಣೆ ಹಮ್ಮಿಕೊಳ್ಳಲಾಗಿದ್ದು, ಜಾಥಾ ನಡೆಯಲಿದೆ.

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನಲ್ಲಿ ಸಂವಿಧಾನ ರಥ-ಸಂಚಲನ ಸಮಿತಿಯ ವತಿಯಿಂದ ನಾಳೆ ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಮಾಲೂರಿನಲ್ಲಿ ಸಂವಿಧಾನ ರಥ-ಸಂಚಲನ ಮತ್ತು ಬೃಹತ್ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ.

***************

ವಿಶ್ವಕಪ್ ವಿಜೇತ ಭಾರತದ ಅಂಧ ಮಹಿಳಾ ಕ್ರಿಕೆಟ್ ತಂಡಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭ ಹಾರೈಸಿ ಅಭಿನಂದಿಸಿದರು. ಇದೇ ವೇಳೆ ರಾಜ್ಯದ ಕ್ರಿಕೆಟ್ ಪಟುಗಳಿಗೆ ತಲಾ ಹತ್ತು ಲಕ್ಷ ನಗದು ಬಹುಮಾನದ ಜೊತೆಗೆ ಸರ್ಕಾರಿ ಉದ್ಯೋಗ ಘೋಷಿಸಿದರು.

ಕಾವೇರಿ ನಿವಾಸದಲ್ಲಿ ಕ್ರಿಕೆಟ್ ತಂಡದ ಪ್ರತೀ ಆಟಗಾರರನ್ನು ವೈಯುಕ್ತಿಕವಾಗಿ ಅಭಿನಂಧಿಸಿ, ಸನ್ಮಾನಿಸಿದ ಅವರು, ಭಾರತ ತಂಡದ ಇತರೆ ರಾಜ್ಯಗಳನ್ನು ಪ್ರತಿನಿಧಿಸುವ ತಂಡದ ಆಟಗಾರರಿಗೆ ತಲಾ ೨ ಲಕ್ಷ ರೂಪಾಯಿ ನಗದು ಬಹುಮಾನ ಘೋಷಿಸಿದ್ದಾರೆ.

ತಂಡದ ನಾಯಕಿ, ತುಮಕೂರಿನ ಶಿರಾ ಮೂಲದ ದೀಪಿಕಾ ಅವರ ನಾಯಕತ್ವ ಮತ್ತು ಆಟದ ವೈಖರಿಯನ್ನು ಮುಖ್ಯಮಂತ್ರಿ ವಿಶೇಷವಾಗಿ ಶ್ಲಾಘಿಸಿದರು.

***************

ಭಾರತ ಸರ್ಕಾರ ಜಾರಿಗೆ ತಂದಿರುವ ಹೊಸ ಕಾರ್ಮಿಕ ಸಂಹಿತೆಯು ದುಡಿಯುವ ವರ್ಗಗಳ ಘನತೆ ಕಾಪಾಡುವುದರೊಂದಿಗೆ ಅವರ ಕಲ್ಯಾಣವನ್ನು ಖಾತ್ರಿ ಪಡಿಸುವಲ್ಲಿ ಕ್ರಾಂತಿಕಾರಕ ಬೆಳವಣಿಗೆಯಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಕಾಮಗಾರಿ ಮಜ್ದೂರ್ ಸಂಘದ ಸಂಘಟನಾ ಕಾರ್ಯದರ್ಶಿ ಕುಮಾರ್‌ನಾಥ್ ಕಲ್ಮಂಜ ಅಭಿಪ್ರಾಯಪಟ್ಟಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನೂತನ ಕಾರ್ಮಿಕ ಸಂಹಿತೆಯು ಅಸಂಘಟಿತ ವಲಯಕ್ಕೆ ಇಎಸ್‌ಐ ಸೌಲಭ್ಯವನ್ನು ವಿಸ್ತರಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಕುಮಾರ್‌ನಾಥ್ ಕಲ್ಮಂಜ

***************

ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸುವಂತೆ ಕೇಂದ್ರ ಸರ್ಕಾರ ನವೆಂಬರ್ ೧೩ರಂದೇ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದೆ. ಆದರೆ ಕೇಂದ್ರದಿಂದ ಅನುಮತಿ ಸಿಕ್ಕಿಲ್ಲ ಎಂದು ಆರೋಪಿಸಿ, ರಾಜ್ಯ ಸರ್ಕಾರ ಖರೀದಿ ಕೇಂದ್ರ ಆರಂಭಿಸದೇ ರೈತರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಆರೋಪಿಸಿದ್ದಾರೆ.

ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಕ್ಕೆಜೋಳ ಬೆಂಬಲ ಬೆಲೆ ನಿಗದಿಪಡಿಸಿದರೂ ಈವರೆಗೂ ರಾಜ್ಯ ಸರ್ಕಾರ ಖರೀದಿ ಕೇಂದ್ರ ತೆರೆದಿಲ್ಲ. ರಾಜ್ಯ ಸರ್ಕಾರ ಆವರ್ತನಿಧಿಯನ್ನು ಬಳಸಿ ರೈತ ಉತ್ಪನ್ನಗಳನ್ನು ಖರೀದಿಸಬೇಕು ಎಂದು ಆಗ್ರಹಿಸಿದ್ದಾರೆ. ಗ್ಯಾರಂಟಿಗಳಿಗೆ ಹಣ ವಿನಿಯೋಗಿಸುವ ನೆಪದಲ್ಲಿ ಸರ್ಕಾರ ರೈತರಿಗೆ ಅನ್ಯಾಯ ಮಾಡುತ್ತಿದೆ ಎಂದು ದೂರಿದ್ದಾರೆ.

******* ಮುಕ್ತಾಯ ********